**All India Radio: Bangalore**
**National Bulletin In Kannada**
**26.05.2026 07.35 a.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**26.05.2026 07.35 a.m.**
**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿಂದು ಸಚಿವ ಡಾ.ಎಸ್.ಜೈಶಂಕರ್ ಅಧ್ಯಕ್ಷತೆಯಲ್ಲಿ ಕ್ವಾಡ್ ವಿದೇಶಾಂಗ ಸಚಿವರ ಸಭೆ ಆಯೋಜನೆ
2. ರಾಷ್ಟ್ರಪತಿ ದ್ರೌಪದಿ ಮುರ್ಮು ಸಿಕ್ಕಿಂ ಪ್ರವಾಸ ; ಇಂದು-ನಾಳೆ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ದೇಶದ ಗಡಿ ಪ್ರದೇಶಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಭೇಟಿ; ಭದ್ರತೆ ಕುರಿತು ಉನ್ನತ ಮಟ್ಟದ ಸಭೆ
4. ಸ್ಯಾಫ್ ಮಹಿಳಾ ಫುಟ್ಬಾಲ್ ಚಾಂಪಿಯನ್ ಶಿಪ್ ; ಮಾಲ್ಡೀವ್ಸ್ ವಿರುದ್ಧ ಭಾರತ ಶುಭಾರಂಭ
5. ಐಪಿಎಲ್ ಟಿ-೨೦ ಕ್ರಿಕೆಟ್ ಪ್ಲೇಆಫ್ ಹಂತ ; ಮೊದಲನೇ ಕ್ವಾಲಿಫಯರ್‌ನಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು, ಗುಜರಾತ್ ಟೈಟಾನ್ಸ್ ಮುಖಾಮುಖಿ

<><><><>

ಭಾರತದ ಆತಿಥ್ಯದಲ್ಲಿ ಇಂದು ನವದೆಹಲಿಯಲ್ಲಿ 'ಕ್ವಾಡ್' ಒಕ್ಕೂಟದ ವಿದೇಶಾಂಗ ಸಚಿವರ ಸಭೆ ನಡೆಯಲಿದ್ದು, ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಈ ಉನ್ನತ ಮಟ್ಟದ ಸಭೆಯಲ್ಲಿ ಆಸ್ಟ್ರೇಲಿಯಾದ ವಿದೇಶಾಂಗ ಸಚಿವೆ ಪೆನ್ನಿ ವಾಂಗ್, ಜಪಾನ್ ವಿದೇಶಾಂಗ ಸಚಿವ ತೊಶಿಮಿತ್ಸು ಮೊಟೇಗಿ ಮತ್ತು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಭಾಗವಹಿಸಲಿದ್ದಾರೆ. ಆಸ್ಟ್ರೇಲಿಯಾ ಮತ್ತು ಜಪಾನ್ ವಿದೇಶಾಂಗ ಸಚಿವರು ನಿನ್ನೆ ದೆಹಲಿಗೆ ಆಗಮಿಸಿದ್ದರೆ, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರು ನಾಲ್ಕು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಮೇ ೨೩ ರಂದೇ ಭಾರತಕ್ಕೆ ಆಗಮಿಸಿದ್ದಾರೆ. ಜಾಗತಿಕ ಅನಿಶ್ಚಿತತೆ ಮತ್ತು ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ನಡೆಯುತ್ತಿರುವ ಈ ಬಾರಿಯ ಸಭೆಯು ತೀವ್ರ ಕುತೂಹಲ ಮೂಡಿಸಿದೆ. ಇಂಡೋ-ಪೆಸಿಫಿಕ್ ವಲಯದಲ್ಲಿ ಶಾಂತಿ, ಭದ್ರತೆ ಮತ್ತು ಸ್ಥಿರತೆಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಭಾರತ, ಅಮೆರಿಕ, ಆಸ್ಟ್ರೇಲಿಯಾ ಮತ್ತು ಜಪಾನ್ ಒಳಗೊಂಡ 'ಕ್ವಾಡ್' ಅತ್ಯಂತ ಪ್ರಮುಖ ಒಕ್ಕೂಟವಾಗಿ ಹೊರಹೊಮ್ಮಿದೆ. ಪ್ರಸ್ತುತ ಒಕ್ಕೂಟದ ಅಧ್ಯಕ್ಷತೆ ವಹಿಸಿರುವ ಭಾರತ, ಈ ಸಭೆಯನ್ನು ಆಯೋಜಿಸುತ್ತಿದೆ. ಇಂಡೋ-ಪೆಸಿಫಿಕ್ ವಲಯವನ್ನು ಮುಕ್ತ, ಸ್ವತಂತ್ರ, ಅಂತರ್ಗತ ಹಾಗೂ ಸಮೃದ್ಧಗೊಳಿಸುವ ಉದ್ದೇಶದೊಂದಿಗೆ ಜಾಗತಿಕ ಒಳಿತಿಗಾಗಿ ಶ್ರಮಿಸಲು ಕ್ವಾಡ್ ರಾಷ್ಟ್ರಗಳು ಬದ್ಧವಾಗಿವೆ. ಕಳೆದ ವರ್ಷ ಜುಲೈ ೧ ರಂದು ವಾಷಿಂಗ್ಟನ್‌ನಲ್ಲಿ ನಡೆದಿದ್ದ ಸಭೆಯ ಚರ್ಚೆಗಳ ಮುಂದುವರಿದ ಭಾಗವಾಗಿ ಇಂದಿನ ಸಭೆ ನಡೆಯಲಿದೆ. ಮುಖ್ಯವಾಗಿ ಆರೋಗ್ಯ ಭದ್ರತೆ, ಹವಾಮಾನ ವೈಪರೀತ್ಯ, ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳು ಹಾಗೂ ದೇಶಗಳ ಕಡಲ-ವಲಯ ಜಾಗೃತಿಯನ್ನು ಬಲಪಡಿಸುವಂತಹ ಸವಾಲುಗಳ ಕುರಿತು ಸಚಿವರು ಸುದೀರ್ಘ ಚರ್ಚೆ ನಡೆಸಲಿದ್ದಾರೆ. ಇದರ ಜೊತೆಗೆ ಇಂಡೋ-ಪೆಸಿಫಿಕ್ ವಲಯದ ಇತ್ತೀಚಿನ ಬೆಳವಣಿಗೆಗಳು ಮತ್ತು ಪರಸ್ಪರ ಹಿತಾಸಕ್ತಿಯ ಅಂತಾರಾಷ್ಟ್ರೀಯ ವಿಷಯಗಳ ಕುರಿತು ಸಭೆಯಲ್ಲಿ ವಿಚಾರ ವಿನಿಮಯ ನಡೆಯಲಿದೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದಿನಿಂದ ಸಿಕ್ಕಿಂ ರಾಜ್ಯಕ್ಕೆ ಮೂರು ದಿನಗಳ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಈ ಭೇಟಿಯ ಅವಧಿಯಲ್ಲಿ ಅವರು ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದು, ಹಲವು ಪ್ರಮುಖ ಸ್ಥಳಗಳನ್ನು ವೀಕ್ಷಿಸಲಿದ್ದಾರೆ. ರಾಷ್ಟ್ರಪತಿಗಳ ಭೇಟಿಯ ಹಿನ್ನೆಲೆಯಲ್ಲಿ ಸಿಕ್ಕಿಂ ಸರ್ಕಾರವು ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದೆ. ರಾಷ್ಟ್ರಪತಿಗಳು ಇಂದು ಸಂಜೆ ಗ್ಯಾಂಗ್ಟಾಕ್‌ನಲ್ಲಿರುವ ಪ್ರಸಿದ್ಧ 'ನಮ್ಗ್ಯಾಲ್ ತಂತ್ರಜ್ಞಾನ ಸಂಸ್ಥೆಗೆ ಭೇಟಿ ನೀಡಲಿದ್ದಾರೆ. ತಮ್ಮ ಪ್ರವಾಸದ ಎರಡನೇ ದಿನವಾದ ನಾಳೆ, ರಾಷ್ಟ್ರಪತಿ ಭಾರತ-ಚೀನಾ ಗಡಿಯ ಪ್ರಮುಖ ಆಯಕಟ್ಟಿನ ಪ್ರದೇಶವಾದ 'ನಾಥೂ ಲಾ ಪಾಸ್'ಗೆ ಭೇಟಿ ನೀಡಲಿದ್ದು, ಅಲ್ಲಿ ನಿಯೋಜಿತರಾಗಿರುವ ಭಾರತೀಯ ಸೇನೆಯ ಯೋಧರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ದಿನ ಅವರು ಗ್ಯಾಂಗ್ಟಾಕ್‌ನಲ್ಲಿ ಆಯೋಜಿಸಲಾಗಿರುವ ಸಿಕ್ಕಿಂ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭದಲ್ಲೂ ಭಾಗವಹಿಸಲಿದ್ದಾರೆ. ಇನ್ನು ಪ್ರವಾಸದ ಅಂತಿಮ ದಿನದಂದು ಗ್ಯಾಂಗ್ಟಾಕ್‌ನ ಪಾಲ್ಜೋರ್ ಸ್ಟೇಡಿಯಂನಲ್ಲಿ ನಡೆಯಲಿರುವ ವಿಶೇಷ ಕಾರ್ಯಕ್ರಮದಲ್ಲಿ ಸಿಕ್ಕಿಂ ಪೊಲೀಸರಿಗೆ ಅತ್ಯುನ್ನತ 'ರಾಷ್ಟ್ರಪತಿ ಪೊಲೀಸ್ ಕಲರ್' ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ.

<><><><>

ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಂದಿನ ಕೆಲವು ದಿನಗಳ ಕಾಲ ದೇಶದ ಗಡಿ ಪ್ರದೇಶಗಳಿಗೆ ಭೇಟಿ ನೀಡಲಿದ್ದು, ಭದ್ರತೆಗೆ ಸಂಬಂಧಿಸಿದ ಉನ್ನತ ಮಟ್ಟದ ಸಭೆಗಳನ್ನು ನಡೆಸಲಿದ್ದಾರೆ. ತಮ್ಮ ಈ ಪ್ರವಾಸದ ಅಂಗವಾಗಿ ಗೃಹ ಸಚಿವರು ನಿನ್ನೆ ರಾತ್ರಿ ರಾಜಸ್ಥಾನದ ಬಿಕಾನೇರ್‌ಗೆ ತಲುಪಿದ್ದಾರೆ. ಸಚಿವರು ಇಂದು ಬೆಳಗ್ಗೆ ಗಡಿ ಭದ್ರತಾ ಪಡೆ - ಬಿಎಸ್‌ಎಫ್‌ನ 'ಸಾಂಚು ಗಡಿ ಕಾವಲುಠಾಣೆಗೆ ಭೇಟಿ ನೀಡಲಿದ್ದು, ಅಲ್ಲಿ ನಿಯೋಜಿತರಾಗಿರುವ ಯೋಧರೊಂದಿಗೆ ಸಂವಾದ ನಡೆಸಲಿದ್ದಾರೆ. ಇದೇ ಸಂದರ್ಭದಲ್ಲಿ ಅವರು ಯೋಧರಿಗಾಗಿ ಹಮ್ಮಿಕೊಳ್ಳಲಾಗಿರುವ ವಿವಿಧ ಕಲ್ಯಾಣ ಯೋಜನೆಗಳಿಗೂ ಚಾಲನೆ ನೀಡಲಿದ್ದಾರೆ. ತದನಂತರ ಬಿಕಾನೇರ್ ಗಡಿ ಪ್ರದೇಶದ ಒಟ್ಟಾರೆ ಭದ್ರತಾ ಪರಿಸ್ಥಿತಿಯ ಕುರಿತು ಅವರು ಪರಿಶೀಲನೆ ನಡೆಸಲಿದ್ದಾರೆ. ಈ ಪ್ರಮುಖ ಸಭೆಯಲ್ಲಿ ಕೇಂದ್ರ ಗೃಹ ಸಚಿವಾಲಯ, ರಾಜಸ್ಥಾನ ಸರ್ಕಾರ ಮತ್ತು ಬಿಎಸ್‌ಎಫ್‌ನ ಹಿರಿಯ ಅಧಿಕಾರಿಗಳು ಹಾಗೂ ಐದು ಗಡಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳು ಭಾಗವಹಿಸಲಿದ್ದಾರೆ. ತಮ್ಮ ಪ್ರವಾಸದ ಮುಂದಿನ ಭಾಗವಾಗಿ ಇದೇ ೨೮ ರಂದು ಗೃಹ ಸಚಿವರು ಗುಜರಾತ್‌ನ ಭುಜ್‌ಗೆ ಭೇಟಿ ನೀಡಲಿದ್ದು, ಅಲ್ಲಿನ ಬಿಎಸ್‌ಎಫ್ ಗಡಿ ಕಾವಲುಠಾಣೆಯನ್ನು ವೀಕ್ಷಿಸಲಿದ್ದಾರೆ. ಜೂನ್ ೫ ರಂದು ತ್ರಿಪುರಾ, ನಂತರ ಪಶ್ಚಿಮ ಬಂಗಾಳದ ಗಡಿ ವಲಯಗಳಿಗೂ ಪ್ರವಾಸ ಕೈಗೊಂಡು ಅಲ್ಲಿನ ಭದ್ರತಾ ಪರಿಸ್ಥಿತಿಯನ್ನು ಪರಾಮರ್ಶಿಸಲಿದ್ದಾರೆ.

<><><><>

ಕಾಂಗೋ ಮತ್ತು ಉಗಾಂಡಾದಲ್ಲಿ 'ಎಬೋಲಾ' ಸೋಂಕಿನ ಉಲ್ಬಣವನ್ನು ವಿಶ್ವ ಆರೋಗ್ಯ ಸಂಸ್ಥೆ - ಡಬ್ಲ್ಯೂಎಚ್‌ಒ ಜಾಗತಿಕ ತುರ್ತು ಪರಿಸ್ಥಿತಿ ಎಂದು ಘೋಷಿಸಿದ ಹಿನ್ನೆಲೆಯಲ್ಲಿ, ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ - ಡಿಜಿಸಿಎ, ವಿಮಾನಯಾನ ಸಂಸ್ಥೆಗಳಿಗೆ ಕಟ್ಟುನಿಟ್ಟಿನ ಮಾರ್ಗಸೂಚಿ ಪ್ರಕಟಿಸಿದೆ. ಇದರ ಅನ್ವಯ, ಉಗಾಂಡಾ-ಕಾಂಗೋ ಸಂಪರ್ಕಿಸುವ ವಿಮಾನಗಳಲ್ಲಿ ಪ್ರಯಾಣಿಕರು ಇಳಿಯುವ ಮುನ್ನ 'ಸ್ವಯಂ ಘೋಷಣಾ ಪತ್ರ' ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ. ಜ್ವರ, ತಲೆನೋವು, ವಾಂತಿಯಂತಹ ಎಬೋಲಾ ಲಕ್ಷಣಗಳಿದ್ದರೆ ತಕ್ಷಣ ಸಿಬ್ಬಂದಿಗೆ ಅಥವಾ ವಿಮಾನ ನಿಲ್ದಾಣದ ವೈದ್ಯಕೀಯ ಘಟಕಕ್ಕೆ ತಿಳಿಸಲು ಇನ್-ಫ್ಲೈಟ್ ಪ್ರಕಟಣೆ ಹೊರಡಿಸಬೇಕು. ಭಾರತಕ್ಕೆ ಬಂದ ೨೧ ದಿನಗಳಲ್ಲಿ ಇಂತಹ ಲಕ್ಷಣಗಳು ಕಂಡರೂ ನಿಯೋಜಿತ ಆಸ್ಪತ್ರೆಗಳನ್ನು ಸಂಪರ್ಕಿಸಬೇಕು. ವಿಮಾನದಲ್ಲಿ ಶಂಕಿತ ಪ್ರಕರಣ ಪತ್ತೆಯಾದರೆ ಆ ಪ್ರಯಾಣಿಕರನ್ನು ಹಿಂಭಾಗದ ಸೀಟಿಗೆ ಸ್ಥಳಾಂತರಿಸಿ, ಸುತ್ತಲಿನ ಸೀಟುಗಳನ್ನು ಖಾಲಿ ಇಡಬೇಕು ಹಾಗೂ ವಿಮಾನಗಳಲ್ಲಿ ಮಾಸ್ಕ್, ಗ್ಲೌಸ್, ಪಿಪಿಇ ಕಿಟ್ ಮತ್ತು ಸ್ಯಾನಿಟೈಸರ್‌ಗಳ ಸಾಕಷ್ಟು ದಾಸ್ತಾನು ಕಾಯ್ದುಕೊಳ್ಳಬೇಕು ಎಂದು ಡಿಜಿಸಿಎ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

<><><><>

ಜಮ್ಮು-ಕಾಶ್ಮೀರದ ಗುಲ್ಮಾರ್ಗ್‌ನ ಗೊಂಡೋಲಾ ರೋಪ್‌ವೇನಲ್ಲಿ ತಾಂತ್ರಿಕ ದೋಷದಿಂದಾಗಿ ಭೂಮಿಯಿಂದ ೫೦೦ ಅಡಿ ಎತ್ತರದ ೬೫ ಕೇಬಲ್ ಕಾರ್ ಕ್ಯಾಬಿನ್‌ಗಳಲ್ಲಿ ಸಿಲುಕಿಕೊಂಡಿದ್ದ ಮಹಿಳೆಯರು, ಮಕ್ಕಳು ಸೇರಿದಂತೆ ೩೦೦ಕ್ಕೂ ಹೆಚ್ಚು ಪ್ರವಾಸಿಗರನ್ನು ಸುರಕ್ಷಿತವಾಗಿ ರಕ್ಷಿಸಲಾಗಿದೆ. ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಜಮ್ಮು-ಕಾಶ್ಮೀರ್ ಪೊಲೀಸ್, ಭಾರತೀಯ ಸೇನೆಯ ಚೀನಾರ್ ಕೋರ್ ಮತ್ತು ಸ್ಥಳೀಯ ಆಡಳಿತದ ಜಂಟಿ ಸಹಯೋಗದಲ್ಲಿ ಸತತ ೭ ಗಂಟೆಗಳ ಕಾಲ ನಡೆದ ರಕ್ಷಣಾ ಕಾರ್ಯಾಚರಣೆಯ ಬಳಿಕ ಎಲ್ಲಾ ಪ್ರವಾಸಿಗರನ್ನು ಯಾವುದೇ ಗಾಯಗಳಿಲ್ಲದೇ ಕೆಳಕ್ಕೆ ಇಳಿಸುವಲ್ಲಿ ತಂಡಗಳು ಯಶಸ್ವಿಯಾಗಿದೆ.

<><><><>

ಭಾರತ ಸೇರಿದಂತೆ ವಿಶ್ವಾದ್ಯಂತ ಲಕ್ಷಾಂತರ ಮುಸ್ಲಿಂ ಬಾಂಧವರಿಂದು ಸೌದಿ-ಅರೇಬಿಯಾದಲ್ಲಿ ಹಜ್ ಪ್ರಾರ್ಥನೆಯ ಪ್ರಮುಖ ವಿಧಿ-ವಿಧಾನಗಳನ್ನು ನೆರವೇರಿಸಲಿದ್ದಾರೆ. ಐದು ದಿನಗಳ ಕಾಲ ನಡೆಯಲಿರುವ ಪವಿತ್ರ ಹಜ್ ಧಾರ್ಮಿಕ ವಿಧಿ-ವಿಧಾನಗಳ ಆರಂಭದ ಸಂಕೇತವಾಗಿ ನಿನ್ನೆ ದೇಶ-ವಿದೇಶಗಳ ಯಾತ್ರಿಕರು ಮಿನ ನಗರದಲ್ಲಿ ಸೇರಿದ್ದರು. ಇಂದು ಮುಂಜಾನೆ ಪ್ರಾರ್ಥನೆಯನ್ನು ಸಲ್ಲಿಸಿದ ನಂತರ ಯಾತ್ರಿಕರು ಹಜ್‌ನ ಅತ್ಯಂತ ಪ್ರಮುಖ ವಿಧಿ-ವಿಧಾನಕ್ಕಾಗಿ ಅರಾಫತ್ ನತ್ತ ಪ್ರಯಾಣ ಬೆಳೆಸಲಿದ್ದಾರೆ. ದಿನವೀಡಿ ಅರಾಫತ್‌ನಲ್ಲೇ ಕಳೆಯಲಿರುವ ಯಾತ್ರಾರ್ಥಿಗಳು ಜಗತ್ತಿನ ಕಲ್ಯಾಣಕ್ಕಾಗಿ ಹಾಗೂ ತಮ್ಮ ಪಾಪ ಕ್ಷಮಾಪಣೆಗಾಗಿ ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಿದ್ದಾರೆ.

<><><><>

ಇರಾನ್ ಯುದ್ಧವನ್ನು ಕೊನೆಗಾಣಿಸುವ ಯಾವುದೇ ಒಪ್ಪಂದವಾದರೂ ಅದರಲ್ಲಿ ಸೌದಿ-ಅರೇಬಿಯಾ ಸೇರಿದಂತೆ ಹಲವು ರಾಷ್ಟ್ರಗಳು ಅಬ್ರಾಹಂ ಒಪ್ಪಂದವನ್ನು ಕಡ್ಡಾಯವಾಗಿ ಸೇರುವ ಷರತನ್ನು ಒಳಗೊಂಡಿರಬೇಕು ಎಂದು ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಸಂದೇಶ ಹಂಚಿಕೊಂಡಿರುವ ಅವರು, ಇರಾನ್ ಜೊತೆಗಿನ ಮಾತುಕತೆಗಳು ಸಕಾರಾತ್ಮಕವಾಗಿ ಮುನ್ನಡೆಯುತ್ತಿವೆ. ಆದರೆ ಒಂದು ವೇಳೆ ಒಪ್ಪಂದ ತಲುಪುವಲ್ಲಿ ವಿಫಲವಾದರೇ ಮತ್ತೆ ಯುದ್ಧಕ್ಕೆ ಮರಳಬೇಕಾಗತ್ತದೆ ಮತ್ತು ಹಿಂದೆಂದಿಗಿಂತಲೂ ಭೀಕರ ಮತ್ತು ಬಲವಾದ ಸಂಘರ್ಷ ಎದುರಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

<><><><>

ಗೋವಾದ ಮಡ್ಗಾಂವ್‌ನಲ್ಲಿ ನಿನ್ನೆ ನಡೆದ ಸ್ಯಾಫ್ ಮಹಿಳಾ ಫುಟ್ಬಾಲ್ ಚಾಂಪಿಯನ್ ಶಿಪ್‌ನ ಬಿ ಗುಂಪಿನ ಪಂದ್ಯದಲ್ಲಿ ಭಾರತ ತಂಡ ಮಾಲ್ಡೀವ್ಸ್ ವಿರುದ್ಧ ೧೧-೦ ಗೋಲುಗಳ ಅಂತರದ ಭರ್ಜರಿ ಜಯ ಸಾಧಿಸಿ ಶುಭಾರಂಭ ಕಂಡಿದೆ. ಭಾರತದ ಪರ ಅವೇಕಾಸಿಂಗ್ ೪, ಪ್ರಿಯಾಂಕ ನವೊರೆಮ್ ಮತ್ತು ಕರೀಷ್ಮಾ ತಲಾ ೨ ಗೋಲುಗಳನ್ನು ಗಳಿಸಿ ತಂಡಕ್ಕೆ ಕೊಡುಗೆ ನೀಡಿದರು.

<><><><>

ಗುಂಪು ಹಂತದ ಪಂದ್ಯಗಳನ್ನು ಮುಕ್ತಾಯಗೊಳಿಸಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಇಂದಿನಿಂದ ಪ್ಲೇಆಫ್ ಹಂತಕ್ಕೆ ಚಾಲನೆ ದೊರೆಯಲಿದೆ. ಇಂದು ಹಿಮಾಚಲಪ್ರದೇಶದ ಧರ್ಮಶಾಲದಲ್ಲಿ ನಡೆಯಲಿರುವ ಮೊದಲನೇ ಮೊದಲನೇ ಕ್ವಾಲಿಫಯರ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ನೇರವಾಗಿ ಐಪಿಎಲ್ ಫೈನಲ್‌ಗೆ ಪ್ರವೇಶಿಸಲಿದ್ದು, ಸೋತ ತಂಡಕ್ಕೆ ಕ್ವಾಲಿಫಯರ್ ೨ರ ಪಂದ್ಯದಲ್ಲಿ ಫೈನಲ್‌ಗೆ ಏರುವ ಮತ್ತೊಂದು ಅವಕಾಶ ಸಿಗಲಿದೆ. ಇನ್ನು ನಾಳೆ ಪಂಜಾಬ್‌ನ ಮೊಹಾಲಿಯಲ್ಲಿ ನಡೆಯಲಿರುವ ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ್ ರಾಯಲ್ಸ್ ತಂಡಗಳು ಎಲಿಮಿನೇಟರ್ ಪಂದ್ಯದಲ್ಲಿ ಮುಖಾಮುಖಿಯಾಗಲಿವೆ. ಈ ಪಂದ್ಯದಲ್ಲಿ ಸೋಲುವ ತಂಡ ಟೂರ್ನಿಯಿಂದ ಹೊರ ಬೀಳಲಿದ್ದು, ಗೆದ್ದ ತಂಡ ೨ನೇ ಕ್ವಾಲಿಫಯರ್‌ಗೆ ಮುನ್ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>